## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ :** | 272 |
| **ಸದಸ್ಯರ ಹೆಸರು :** | ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| **ಉತ್ತರಿಸಬೇಕಾದ ಸಚಿವರು :** | ಮಾನ್ಯ ಕಂದಾಯ ಸಚಿವರು |
| **ಉತ್ತರಿಸಬೇಕಾದ ದಿನಾಂಕ :** | 11.12.2024 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬಳ್ಳಾರಿ ತಾಲ್ಲೂಕು ತಹಶೀಲ್ದಾರ್ ನಿಯಮಬಾಹಿರವಾಗಿ ಸರ್ಕಾರಿ ಜಾಗಗಳನ್ನು ಖಾಸಗಿಯವರಿಗೆ ಹಕ್ಕು ಬದಲಾವಣೆ ಮಾಡಿಕೊಟ್ಟಿರುವುದಾಗಿ ಅವರ ಮೇಲೆ ಕ್ರಮ ಕೈಗೊಳ್ಳಲು ಸರ್ಕಾರಕ್ಕೆ ಜಿಲ್ಲಾಧಿಕಾರಿಗಳು ಪತ್ರ ಬರೆದಿರುವುದು ನಿಜವೇ; ಹಾಗಿದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರಗಳನ್ನು ಒದಗಿಸುವುದು) | ಬಳ್ಳಾರಿ ಗ್ರಾಮದ ಸ.ನಂ.348 ವಿಸ್ತೀರ್ಣ 11.59 ಎಕರೆ ಜಮೀನಿಗೆ ಸಂಬಂಧಿಸಿದಂತೆ ಹಾಗೂ ಬಳ್ಳಾರಿ ಗೋನಾಳ್ ಸ.ನಂ.3/1, 3/2 ಮತ್ತು 5 ರ ಜಮೀನಿಗಳಿಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳಿಂದ ಪ್ರಸ್ತಾವನೆ ಸ್ವೀಕೃತವಾಗಿದ್ದು, ಶಿಸ್ತು ಕ್ರಮ ಜರುಗಿಸುವ ಸಂಬಂಧ ಪ್ರಾದೇಶಿಕ ಆಯುಕ್ತರಿಂದ ವರದಿ ಕೋರಲಾಗಿರುತ್ತದೆ. |
| ಆ) | ನಿಯಮಬಾಹಿರವಾಗಿ ಖಾಸಗಿಯವರಿಗೆ ನೀಡಲಾಗಿರುವ ಈ ಜಮೀನುಗಳನ್ನು ಸರ್ಕಾರ ವಾಪಸ್ ಪಡೆಯಲು ಕ್ರಮಕೈಗೊಂಡಿದೆಯೇ; | ಮೇಲ್ಕಂಡ ಜಮೀನುಗಳಿಗೆ ಸಂಬಂಧಿಸಿದಂತೆ ಪಹಣಿಯು ಖಾಸಗಿಯವರ ಹೆಸರಿಗೆ ಬದಲಾವಣೆ ಆಗಿರುವುದಿಲ್ಲ. |
| ಇ) | ನಿಯಮಬಾಹಿರವಾಗಿ ಹಕ್ಕು ಬದಲಾವಣೆ ಮಾಡಿಕೊಟ್ಟಿರುವ ಈ ಅಧಿಕಾರಿಯ ಮೇಲೆ ಕೈಗೊಂಡ ಕಾನೂನು ಕ್ರಮ ಕುರಿತಂತೆ ಈ ಅಧಿಕಾರಿಯ ಆಸ್ತಿಯನ್ನು ಮುಟ್ಟುಗೋಲು ಹಾಕಿಕೊಳ್ಳಲು ಮತ್ತು ಈ ಅಧಿಕಾರಿಯು ಈ ಹಿಂದೆ ಕೆಲಸ ನಿರ್ವಹಿಸಿದ್ದ ಹುದ್ದೆಗಳಲ್ಲೂ ಅಕ್ರಮವಾಗಿ ಸರ್ಕಾರಿ ಜಾಗಗಳನ್ನು ಖಾಸಗಿಯವರಿಗೆ ನೀಡಿದ್ದರ ಬಗ್ಗೆ ದೂರುಗಳಿದ್ದು; ಈ ಎಲ್ಲಾ ಪ್ರಕರಣಗಳನ್ನು ತನಿಖೆ ನಡೆಸಲು ಸರ್ಕಾರ ಮುಂದಾಗುವುದೆ? (ಮಾಹಿತಿ ಒದಗಿಸುವುದು) | ಮುಂದುವರೆದು, ಸದರಿ ಅಧಿಕಾರಿಯವರ ವಿರುದ್ಧ ಈ ಹಿಂದೆ ಸರ್ಕಾರಿ ಜಮೀನುಗಳನ್ನು ನಿಯಮಬಾಹಿರವಾಗಿ ಹಕ್ಕು ಬದಲಾವಣೆ ಮಾಡಿಕೊಟ್ಟಿರುವ ಸಂಬಂಧ ಯಾವುದೇ ದೂರುಗಳು ಸ್ವೀಕೃತವಾಗಿರುವುದಿಲ್ಲ. |

ಸಂಖ್ಯೆ: ಇ-ಕಂಇ 555 ಎಎಸ್‌ಡಿ 2024

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು